# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 232 (209)

ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಉತ್ತರಿಸುವ ದಿನಾಂಕ : 02.02.2021

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಣಿಯಾದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಆ ಮೂಲಕ ಹೂಡಲಾದ ಬಂಡವಾಳದ ಪ್ರಮಾಣ ಎಷ್ಟು; | • ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡುವ ಸಮಿತಿ ಹಾಗೂ ರಾಜ್ಯ ಮಟ್ಟದ ಏಕ ಗವಾಕ್ಷಿ ಒಪ್ಪಿಗೆ ನೀಡುವ ಸಮಿತಿಗಳಿಂದ 567 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು. ರೂ.72,177 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, 3,39,100 ಜನರಿಗೆ ಉದ್ಯೋಗ ಸೃಷ್ಟಿಯಾಗಲಿದೆ.<br>• ಅವುಗಳಲ್ಲಿ 17 ಯೋಜನೆಗಳು ಕಾರ್ಯಾರಂಭ ಮಾಡಿದ್ದು ರೂ.4576 ಕೋಟಿ ಬಂಡವಾಳ ಹೂಡಿಕೆಯಾಗಿದ್ದು. 33,742 ಜನರಿಗೆ ಉದ್ಯೋಗ ಒದಗಿರುತ್ತದೆ.<br>• 544 ಯೋಜನೆಗಳು ಅನುಷ್ಠಾನದ ವಿವಿಧ ಹಂತಗಳಲ್ಲಿದ್ದು ಅವುಗಳಲ್ಲಿ ರೂ.67,032 ಕೋಟಿ ಬಂಡವಾಳ ಹೂಡಿಕೆಯಾಗಲಿದೆ. 2,98,595 ಜನರಿಗೆ ಉದ್ಯೋಗಾವಕಾಶ ಒದಗಲಿದೆ.<br>• 6 ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿರುತ್ತವೆ. |
| ಆ | ಆ ಮೂಲಕ ಸೃಷ್ಟಿಸಿದ ಉದ್ಯೋಗಾವಕಾಶಗಳು ಮತ್ತು ಆ ಕುರಿತಾದ ಗುರಿ ಮತ್ತು ಸಾಧನೆಗಳೇನು; | 17 ಯೋಜನೆಗಳು ಕಾರ್ಯಾರಂಭ ಮಾಡಿದ್ದು, ರೂ.4576 ಕೋಟಿ ಬಂಡವಾಳ ಹೂಡಿಕೆಯಾಗಿದ್ದು, 33,742 ಜನರಿಗೆ ಉದ್ಯೋಗ ಒದಗಿರುತ್ತದೆ. |
| ಇ | ತುಮಕೂರು ಜಿಲ್ಲೆಯೂ ಸೇರಿದಂತೆ ಯಾವ ಯಾವ ಜಿಲ್ಲೆಗಳಲ್ಲಿ ಸದರಿ ಕೈಗಾರಿಕೆಗಳು ಸ್ಥಾಪಿಸಲ್ಪಟ್ಟಿವೆ; | ಸದರಿ ಕೈಗಾರಿಕೆಗಳು ರಾಜ್ಯದ ಬೆಂಗಳೂರು (ನಗರ), ಬೆಂಗಳೂರು (ಗ್ರಾಮಾಂತರ), ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಿಜಾಪುರ, ದಾರವಾಡ, ಬಳ್ಳಾರಿ, ಕೊಪ್ಪಳ, ಬೆಳಗಾವಿ, ಯಾದಗಿರಿ, ಉತ್ತರಕನ್ನಡ, ದಕ್ಷಿಣ ಕನ್ನಡ, ಶಿವಮೊಗ್ಗ, ಉಡುಪಿ, ಬಾಗಲಕೋಟೆ, ರಾಯಚೂರು, ಕಲ್ಬುರ್ಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುತ್ತಿವೆ. |

| | | |
|---|---|---|
| ಈ | ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಎಂದು ಗುರುತಿಸಲ್ಪಟ್ಟ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ನೋಂದಣಿ ಮಾಡಿಕೊಳ್ಳುವಲ್ಲಿ ಸರ್ಕಾರದ ಹೆಚ್ಚಿನ ಪ್ರೋತ್ಸಾಹದಾಯಕ ಕ್ರಮಗಳೇನು? | ಈ ನೀತಿಯಲ್ಲಿ ಹಿಂದುಳಿದಿರುವ ಕೈಗಾರಿಕಾ ಅಭಿವೃದ್ಧಿಯನುಸಾರ ಬಂಡವಾಳ ಹೂಡಿಕೆಗಳಿಗೆ ರಿಯಾಯಿತಿ ಒದಗಿಸಲು ರಾಜ್ಯದ ಜಿಲ್ಲೆ/ತಾಲ್ಲೂಕುಗಳನ್ನು **ಮೂರು ಜೋನ್‌ಗಳನ್ನಾಗಿ** ವಿಂಗಡಿಸಲಾಗಿದೆ. ಜೋನ್-1 ಹಗೂ 2 ರಡಿ ಕೈಗಾರಿಕಾ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆ/ತಾಲ್ಲೂಕುಗಳು ಸೇರಿರುತ್ತವೆ. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳನ್ನು ಜೋನ್-3 ರಲ್ಲಿ ವರ್ಗೀಕರಿಸಲಾಗಿದೆ.<br>ಕೈಗಾರಿಕಾ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆ/ತಾಲ್ಲೂಕುಗಳಲ್ಲಿ ಬಂಡವಾಳ ಆಕರ್ಷಿಸಲು ಹೆಚ್ಚಿನ ರಿಯಾಯಿತಿಗಳನ್ನು ಒದಗಿಸುತ್ತಿದ್ದು, ಇದರಿಂದ ರಾಜ್ಯದಲ್ಲಿ ಸಮತೋಲಿತ ಕೈಗಾರಿಕಾಭಿವೃದ್ಧಿಯನ್ನು ಖಾತರಿಪಡಿಸಿಕೊಳ್ಳಲು ಉದ್ದೇಶಿಸಲಾಗಿದೆ. |

ಸಿಐ 40 ಎಸ್‌ಪಿಐ 2021

**(ಜಗದೀಶ್ ಶೆಟ್ಟರ್)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು